**2** ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.

<u>ಸಿ.ಸಿ.ನಂ. **997/2022**</u>

ದಿನಾಂಕಃ **09-09-2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ವಿದ್ಯಾಶಂಕರ ನಾಯ್ಕ | ಚಾಸಾ-10, ಪ್ರಾಸ-8 |
| ತಂದೆಯ ಹೆಸರು ಃ | ಬಿ ಗೋವಿಂದನಾಯ್ಕ | |
| ವಯಸ್ಸು ಃ | 51 ವರ್ಷ | |
| ಉದ್ಯೋಗ ಃ | ಮುಖ್ಯ ಪೇದೆ | |
| ವಾಸ ಃ | ಕಡೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ನಾನು ಜುನ್ 2018 ರಿಂದ ಸೆಪ್ಟಂಬರ್ 2022 ರವರೆಗೆ ನಾನು ಸಖರಾಯಪಟ್ಟಣ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 14.04.2022 ರಂದು ನಾನು ಠಾಣಾ ಪ್ರಭಾರೆಯಲ್ಲಿದ್ದಾಗ ಚಾಸಾ-9 ರವರು ಚಾಸಾ-1 ರವರ ಹೇಳಿಕೆಯನ್ನು ನಿಪಿ-1 ರಂತೆ ಶಿವಮೊಗ್ಗದ ಎನ್ ಹೆಚ್ ಆಸ್ಪತ್ರೆಯಿಂದ ಪಡೆದುಕೊಂಡು ಬಂದು ನನಗೆ ನೀಡಿದ್ದು, ಸದರಿ ಹೇಳಿಕೆಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 54ಃ2022 ರಂತೆ ಪ್ರಕರಣ ದಾಖಲು ಮಾಡಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ರವಾನಿಸಿರುತ್ತೇನೆ. ನಿಪಿ-1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.  ಸಾಕ್ಷಿ ಪ್ರವವ ನೋಡಿ ಗುರುತಿಸಿದ್ದು ನಿಪಿ-7 ಎಂದು, ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.  ದಿಃ 15.04.2022 ರಂದು ಚಾಸಾ-3 ರವರು ತೋರಿಸಿದ ಸ್ಥಳದಲ್ಲಿ ಚಾಸಾ-5 ಮತ್ತು 6 ರವರ ಸಮಕ್ಷಮ ನಿಪಿ-2 ರಂತೆ ಮಹಜರ್ ಕ್ರಮ ಜರುಗಿಸಿರುತ್ತೇನೆ.  ಸಾಕ್ಷಿ ಸಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು.  ಅದೇ ಸಮಯದಲ್ಲಿ ನಿಪಿ-3 ರಂತೆ ಛಾಯಾಚಿತ್ರ ತೆಗೆಸಿರುತ್ತೇನೆ.  ಅದೇ ದಿನ ಚಾಸಾ-5 ಮತ್ತು 6 ರವರ ಸಮಕ್ಷಮ 1.30 ರಿಂದ 2.00 ಗಂಟೆ ಸಮಯದಲ್ಲಿ ಸಖರಾಯಪಟ್ಟಣ ಪೋಲಿಸ್ ಠಾಣಾ ಆವರಣದಲ್ಲಿ ನಿಪಿ-4 ರಂತೆ ಮಹಜರ್ ಕ್ರಮ ಜರುಗಿಸಿ ಅಪಘಾತಪಡಿಸಿದ ಜೆ ಸಿ ಬಿ ಕೆಎ-13 ಪಿ-7283 ಮತ್ತು ಅಪಘಾತಕ್ಕೊಳಗಾದ ಬೈಕ್ ಕೆಎ-18 ಎಕ್ಸ್-4701 ವಶಪಡಿಸಿಕೊಂಡಿರುತ್ತೇನೆ.  ಸದರಿ ಬೈಕ್ ನ ಮಾಸ್ಕ ಮತ್ತು ಬಲಭಾಗದ ಸೆಫ್ಟಿ ಗಾರ್ಡ ಉಜ್ಜಿ ಹೋಗಿರುತ್ತದೆ.  ಜೆ ಸಿ ಬಿ ಗೆ ಯಾವುದೇ ಹಾನಿಯಾಗಿರುವುದು ಕಂಡುಬಂದಿರುವುದಿಲ್ಲ.  ಅದೇ ಸಮಯದಲ್ಲಿ ನಿಪಿ-5 ರಂತೆ ಛಾಯಾಚಿತ್ರ ತೆಗೆಸಿರುತ್ತೇನೆ.  ಸಾಕ್ಷಿಯು ನಿಪಿ-4 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು.  ಅದೇ ದಿನ ಚಾಸಾ-2 ರಿಂದ 4 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ.

ಪಾಟೀಸವಾಲುಃ ಆರೋಪಿ ಪರ  ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು .

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
2 ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.